4-3-2025

2

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಹಣಮಂತ ಆರ್. ನಿರಾಣಿ ಇವರು ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಯ ಕುರಿತು**

**ವಿಷಯ:**

ರಾಜ್ಯದ 09 ವಿಶ್ವವಿದ್ಯಾಲಯಗಳಾದ ಬಾಗಲಕೋಟೆ, ಬೀದರ, ಹಾಸನ, ಚಾಮರಾಜನಗರ, ಹಾವೇರಿ, ಕೊಡಗು, ಕೊಪ್ಪಳ, ಮಹಾರಾಣಿ ವಿವಿ, ಮಂಡ್ಯ, ಮತ್ತು ನೃಪತುಂಗ ವಿವಿಗಳನ್ನು ಆರ್ಥಿಕ ಹೊರೆ ಮೂಲಭೂತ ಸೌಕರ್ಯ ಹಾಗೂ ಭೋಧಕೇತರ/ಬೋಧಕರ ಸಿಬ್ಬಂಧಿ ಕೊರತೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಕೊರತೆ ಸೇರಿದಂತೆ ಅನೇಕ ಕಾರಣಗಳನ್ನು ನೀಡಿ ರಾಜ್ಯದ 09 ವಿಶ್ವವಿದ್ಯಾಲಯಗಳನ್ನು ರಾಜ್ಯ ಸರ್ಕಾರವು ಮುಚ್ಚುವ ನಿರ್ಧಾರ ಮಾಡಿರುವುದು ಖಂಡನೀಯ ವಿಷಯವಾಗಿದೆ.

ಏಕೆಂದರೆ ಮುಖ್ಯವಾಗಿ ಹಿಂದುಳಿದ ಹಾಗೂ ಶೈಕ್ಷಣಿಕವಾಗಿ ಹಿಂದುಳಿದ ಜಿಲ್ಲೆಗಳಾಗಿವೆ. ಸ್ಥಾಪನೆಗೊಂಡಿರುವ 09 ವಿವಿಗಳನ್ನು ಮುಚ್ಚುವ ನಿರ್ಧಾರದಿಂದಾಗಿ ವಿಶೇಷವಾಗಿ ಬಡ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕಲ್ಲದೇ ಪ್ರಾದೇಶಿಕವಾಗಿಯೂ ಸಹ ಆಯಾ ಜಿಲ್ಲೆಗಳ ಸರ್ವಾಂಗೀಣ ಅಭಿವೃದ್ಧಿಗೆ ಮಾರಕವಾಗುವುದರ ಜೊತೆಗೆ ರೈತಾಪಿ ಹಿಂದುಳಿದ ವರ್ಗದ ಮಕ್ಕಳ ಉನ್ನತ ಶಿಕ್ಷಣ ಪಡೆಯುವ ಕನಸು ಸಹ ಗಗನಕುಸುಮವಾಗಲಿದೆ ಹಾಗೂ ಬಡ ಹಿಂದುಳಿದ ಪ್ರದೇಶದ ವಿದ್ಯಾರ್ಥಿಗಳ ಶೈಕ್ಷಣಿಕ ಹಕ್ಕನ್ನು ರಾಜ್ಯ ಸರ್ಕಾರವೇ ಕಸಿದುಕೊಂಡಂತಾಗುವುದಲ್ಲವೇ? ಆ ಭಾಗದ ವಿಧ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ವಂಚಿತರಾಗುವುದಿಲ್ಲವೇ? ಆದ್ದರಿಂದ ಸರ್ಕಾರವು ಈ 09 ವಿವಿಗಳ ಮುಚ್ಚುವ ನಿರ್ಧಾರವನ್ನು ಈ ಕೂಡಲೇ ಹಿಂಪಡೆಯಬೇಕು.

2021-22ರಲ್ಲಿ ಈ ಹಿಂದೆ ಬಿಜೆಪಿ ಸರ್ಕಾರವು ವಿವಿಗಳ ಅವಶ್ಯಕತೆಗೆ ಹಾಗೂ ಅದರ ಬಗ್ಗೆ ಸಾಕಷ್ಟು ಪರಿಶೀಲಿಸಿ/ಚರ್ಚಿಸಿ ವಿಚಾರ ವಿನಿಮಯ ಮಾಡಿದ ನಂತರ ಅಂದಿನ ಉನ್ನತ ಶಿಕ್ಷಣ ಸಚಿವರು ಹಾಗೂ ಮುಖ್ಯಮಂತ್ರಿಗಳು ಈ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿದ್ದಾರೆ. ಹಾಗೂ ಸದರಿ ವಿವಿಗಳ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ಕೂಡ ಅನುದಾನ ಹಂಚಿಕೆ ಮಾಡಲಾಗಿತ್ತು ಆದರೆ ಇಲ್ಲಿವರೆಗೂ ಸಹ ಯಾವುದೇ ಅನುದಾನ ಮಂಜೂರಾಗದೇ ಇರುವುದು ದುರದೃಷ್ಟಕರ ಸಂಗತಿಯಾಗಿದೆ. ಆದ್ದರಿಂದ ರಾಜ್ಯ ಸರ್ಕಾರವು ವಿ.ವಿ ಮುಚ್ಚುವ ನಿರ್ಧಾರವನ್ನು ಕೈಬಿಡಬೇಕು ಹಾಗೂ ಈ ಕೂಡಲೇ ಸದರಿ ವಿವಿಗಳ ಶ್ರೇಯೊಭಿವೃದ್ಧಿಗೆ ರಾಜಕೀಯ ಮಾಡದೇ ಈ ಹಿಂದೆ ನೀಡಲಾದ ಆಯವ್ಯಯದಲ್ಲಿ ಹಂಚಿಕೆ ಮಾಡಲಾದ ಅನುದಾನದ ಜೊತೆಗೆ ಮುಂಬರುವ ಬಜೆಟ್ ನಲ್ಲಿ ಹೆಚ್ಚಿನ ಅನುದಾನ ನೀಡಿ ಶಿಕ್ಷಣ ಕ್ಷೇತ್ರಕ್ಕೆ ಅನಕೂಲವಾಗುವ ನಿಟ್ಟಿನಲ್ಲಿ ಸರ್ಕಾರವು ಮುಂದಾಗಬೇಕೆಂದು ರಾಜ್ಯಾದ್ಯಂತ ವಿದ್ಯಾರ್ಥಿ ಪರಿಷತ್ (ಎಬಿವಿಪಿ) ಸಂಘಟನೆ/ಪಾಲಕರು/ಶಿಕ್ಷಣ ತಜ್ಞರು ಸೇರಿದಂತೆ ಸರ್ಕಾರದ 09 ವಿವಿ ಮುಚ್ಚುವ ನಿರ್ಧಾರದ ವಿರುದ್ಧ ಪ್ರತಿಭಟನೆಗಳನ್ನು ನಡೆಸುತ್ತಿರುವುದನ್ನು ಸರ್ಕಾರದ ಗಮನಕ್ಕೆ ತರಬಯಸುತ್ತೇನೆ, ಮತ್ತು ಪ್ರತಿ ಜಿಲ್ಲೆಗೊಂದು ವಿವಿ ಆಗಬೇಕೆನ್ನುವುದನ್ನು ಸಹ ಹೊಸ ಶಿಕ್ಷಣ ನೀತಿಯ ಆಶಯವಾಗಿದೆ ಎಂಬುದನ್ನು ಗಮನಿಸಬೇಕಾದ ಅಂಶವಾಗಿದೆ ಎಂದು ಈ ಮೂಲಕ ಮಾನ್ಯ ಉನ್ನತ ಶಿಕ್ಷಣ ಸಚಿವರನ್ನು ಶೂನ್ಯ ವೇಳೆಯಲ್ಲಿ ಸರ್ಕಾರವನ್ನು ಒತ್ತಾಯಿಸುತ್ತೇನೆ.

**ಉತ್ತರ:**

ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟಿರುವ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿದ್ದು, ಸದರಿ ಸಮಿತಿಯು ಈ ಬಗ್ಗೆ ಸಭೆ ನಡೆಸಿದ್ದು, ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

**ಸಂಖ್ಯೆ: ಇಡಿ 43 ಯುಎನ್ಇ 2025**

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು